ಪತ್ರಿಕೆಯನ್ನು ತಯಾರು ಮಾಡಿ ಸರ್ಕಾರದ ಅನುಮತಿಗಾಗಿ ಮುಖ್ಯ ಇಂಜಿನಿಯರ್, ನೀರಾವರಿ ಇಲಾಖೆ, ಬೆಂಗಳೂರು ಇವರಿಗೆ ಎಂದು ಒಪ್ಪಿಗೆಗೆ ಕಳುಹಿಸಲಾಗಿದೆ?

ಅ) ಬಾಂದಾರ ಕಟ್ಟುವುದರಿಂದ ಎಷ್ಟು ಎಕರೆ ಜಮೀನಿಗೆ ನೀರನ್ನು ಒದಗಿಸಲಾಗುವುದು ಮತ್ತು ಯಾವ ಯಾವ ಗ್ರಾಮದ ಜನರಿಗೆ ಇದರಿಂದ ಉಪಯೋಗವಾಗುವುದು ಹಾಗೂ ಇದಕ್ಕೆ ಎಷ್ಟು ಹಣ ಬೇಕಾಗುವುದು;

ಆ) ಇಲ್ಲಿ ಕೂಡಲೇ ಬಾಂದಾರ ಕಟ್ಟಲು ಸರ್ಕಾರದವರು ಯಾವ ಕ್ರಮ ಕೈಗೊಳ್ಳುವರು ಮತ್ತು ಇನ್ನು ಎಷ್ಟು ದಿವಸಗಳಲ್ಲಿ ಈ ಕೆಲಸಕ್ಕೆ ಮಂಜೂರಾತಿ ನೀಡಿ ಕೆಲಸವನ್ನು ಪ್ರಾರಂಭಿಸಲಾಗುದು?

ಶ್ರೀ ಕೆ.ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಮಂತ್ರಿಗಳು) :

ಅ) ಅಂದಾಜು ಪತ್ರಿಕೆ ಮತ್ತು ನಕ್ಷೆ ಕಳುಹಿಸಿರುವುದಿಲ್ಲ. ಆದರೆ ಪೂರ್ವಾನ್ವೇಷಣಾ ವರದಿಯನ್ನು ದಿನಾಂಕ 26-11-91ರಂದು ಸಣ್ಣ ನೀರಾವರಿ ಮುಖ್ಯ ಇಂಜಿನಿಯರ್‌ರವರಿಗೆ ಕಳುಹಿಸಿದ್ದಾರೆ.

ಆ) ಈ ಬಾಂದಾರದಿಂದ ಸುಮಾರು 500 ಎಕರೆ ಜಮೀನಿಗೆ ನೀರಾವರಿ ಒದಗಿಸಬಹುದಾಗಿದೆ. ಈ ಯೋಜನೆಯಿಂದ ಕಾದ್ರೊಳ್ಳಿ ಮತ್ತು ಎಂ.ಕೆ. ಹುಬ್ಬಳ್ಳಿ ಗ್ರಾಮದ ಜನರಿಗೆ ಉಪಯೋಗವಾಗುವುದು. ಈ ಯೋಜನೆಗೆ ಸುಮಾರು 65.00 ಲಕ್ಷ ರೂ.ಗಳು ಬೇಕಾಗಬಹುದು.

ಇ) ಈ ಯೋಜನೆ ಬಗ್ಗೆ ವಿವರವಾದ ತನಿಖೆ ನಡೆಸಿ ಅಂದಾಜು ಪತ್ರಿಕೆಯನ್ನು ತಯಾರಿಸಿ ಕಾಮಗಾರಿಯು ಶಕ್ಯವೆಂದು ಕಂಡುಬಂದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಚಿಮಕೋಡಿ ಗ್ರಾಮದ ಹತ್ತಿರ ಏತ ನೀರಾವರಿ ಕಾಮಗಾರಿ

1130 (1906) ಶ್ರೀ ನಾರಾಯಣರಾವ್ ಮನಹಳ್ಳಿ (ಬೀದರ್) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ತಾಲ್ಲೂಕಿನ ಚಿಮಕೋಡಿ ಗ್ರಾಮದ ಹತ್ತಿರ ಒಂದು ಏತ ನೀರಾವರಿ ಕಾಮಗಾರಿಯು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಇದು ಕಾರ್ಯ ನಿರ್ವಹಿಸುತ್ತಿದಯೆ? ಅಥವಾ ಇಲ್ಲವೇ?

ಇ) ಇಲ್ಲದಿದ್ದಲ್ಲಿ ಈ ಯೋಜನೆಯು ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಮಾಡಲು ಸರ್ಕಾರವು ಯಾವುದಾದರೂ ಕ್ರಮವನ್ನು ಕೈಗೊಳ್ಳಲು ಯೋಜಿಸಿದೆಯೇ?

ಶ್ರೀ ಕೆ.ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು) :

ಅ) ಬಂದಿದೆ.

ಆ) ಇದು ಕಾರ್ಯ ನಿರ್ವಹಿಸುತ್ತಿದೆ ಆದರೆ ದೀರ್ಘಕಾಲ ಬಳಕೆಯಲ್ಲಿದು ಪಂಪುಗಳ ಕಾರ್ಯದಕ್ಷತೆ ಕುಂಠಿತಗೊಂಡಿದೆ ಮತ್ತು 243 ಹೆಕ್ಟೇರ್ ಅಚ್ಚುಕಟ್ಟಿನ ಪೈಕಿ 100 ಹೆಕ್ಟೇರ್ ನೀರಾವರಿ ಆಗುತ್ತಿದೆ.

ಇ) ಹೈದರಾಬಾದ್ ಕರ್ನಾಟಕ ಅಭಿವೃದ್ಧಿ ಬೋರ್ಡ್‌ನ ಯೋಜನೆ ಅಡಿಯಲ್ಲಿ 1992-93ರಲ್ಲಿ ಪಂಪುಗಳನ್ನು ಬದಲಾಯಿಸಲು ಉದ್ದೇಶಿಸಲಾಗಿದೆ.

ಬೀದರ್ ಜಿಲ್ಲೆಯಲ್ಲಿರುವ ಯುವಕ ಸಂಘಗಳ ಸಂಖ್ಯೆ

1131(1907) ಶ್ರೀ ನಾರಾಯಣರಾವ್ ಮನಹಳ್ಳಿ (ಬೀದರ್) : ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಬೀದರ್ ಜಿಲ್ಲೆಯಲ್ಲಿರುವ ಯುವಕ ಸಂಘಗಳು ಎಷ್ಟು?
2. 1989-90 ರಿಂದ 1990-91 ಮತ್ತು 1991-92 ರವರೆಗೆ ಆಯವ್ಯಯದಲ್ಲಿ ನಿಗಧಿಪಡಿಸಿರುವ ಹಣ ಎಷ್ಟು?

ಶ್ರೀ ಎಸ್.ರಮೇಶ್ (ಯುವಜನ ಸೇವಾ. ಕ್ರೀಡಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) :

1. 861 ಯುವಕ ಮಂಡಳಿಗಳು
2. ಆಯವ್ಯಯದಲ್ಲಿ ಹಂಚಿಕೆಯಾದ ವಿವರ ಈ ಕೆಳಗಿನಂತಿದೆ.

ವರ್ಷ	ರೂಪಾಯಿಗಳು
1989-90	54.000-00
1990-91	88.000-00
1991-92	1.78.000-00

ಧಾರವಾಡ ಜಿಲ್ಲಾ ಪರಿಷತ್ತಿನಲ್ಲಿ ದಶಲಕ್ಷ ಯೋಜನೆಯಡಿಯಲ್ಲಿ ಮಂಜೂರಾದ ಹಣ

1133 (1910) ಶ್ರೀ ಮಂಜುನಾಥ ಸಿ. ಕುನ್ನೂರು (ಶಿಗ್ಗಾವ) : ಮಾನ್ಯ ಗ್ರಾಮಾಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲಾ ಪರಿಷತ್ತಿನಿಂದ ದಶಲಕ್ಷ ಬಾವಿ ಯೋಜನೆಯಡಿಯಲ್ಲಿ 1991-92ನೇ ಸಾಲಿನಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ. ಇದರಲ್ಲಿ ಎಷ್ಟು ಹಣ ಖರ್ಚು ಮಾಡಲಾಗಿದೆ;

ಆ) ಸದರಿ ಯೋಜನೆಯಡಿಯಲ್ಲಿ ಯಾವ ಯಾವ ಗ್ರಾಮಗಳಲ್ಲಿ ಕೆಲಸ ಕೈಗೆತ್ತಿಕೊಳ್ಳಲಾಗಿದೆ ಹಾಗೂ ಎಷ್ಟು ಹಣ ಖರ್ಚು ಮಾಡಲಾಗಿದೆ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗ್ರಾಮಾಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಕಂದಾಯ ಸಚಿವರು):

ಅ) 1991-92ನೇ ಸಾಲಿನಲ್ಲಿ ದಶಲಕ್ಷ ಬಾವಿ ಯೋಜನೆಯಡಿಯಲ್ಲಿ ಧಾರವಾಡ ಜಿಲ್ಲಾ ಪರಿಷತ್ತಿನಿಂದ ಬಿಡುಗಡೆಯಾಗ ಹಣ ರೂ. 64.819 ಲಕ್ಷಗಳು (ಪ್ರಾರಂಭ ಶಿಲ್ಕು ಸೇರಿ) ಇದರಲ್ಲಿ ಖರ್ಚಾದ ಹಣ ರೂ. 43.943 ಲಕ್ಷಗಳು.